**ಕರ್ನಾಟಕ ಸರ್ಕಾರ**

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಮೂಶಿಇ/ಶೈಶಾ-02/ಹೆ.ಶು.ಮ.ಪಾ/2022-23 ದಿನಾಂಕ: 29.06.2022

**ಸುತ್ತೋಲೆ**

ವಿಷಯ: ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದಾಖಲಾಗುವ ವಿದ್ಯಾರ್ಥಿನಿಯರಿಗೆ ರೂ.456/- ಶುಲ್ಕದಿಂದ ವಿನಾಯಿತಿ ನೀಡಿ, ಸದರಿ ಮೊತ್ತವನ್ನು ಪ್ರಾಂಶುಪಾಲರ ಖಾತೆಗೆ ಜಮೆ ಮಾಡುವ ಕುರಿತು.

ಉಲ್ಲೇಖ:
1. ಸರ್ಕಾರಿ ಆದೇಶ ಸಂಖ್ಯೆ: ಇಡಿ 67 ಹೆಚ್‌ಪಿಯು 2018 ಬೆಂಗಳೂರು ದಿನಾಂಕ 15.12.2018
2. ಸರ್ಕಾರದ ಆದೇಶ ಸಂಖ್ಯೆ: ಇಪಿ 37 ಯೋಯೋಕ 2022 ಬೆಂಗಳೂರು, ದಿನಾಂಕ: 28.06.2022.

* * * * *

ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಪಿಯುಸಿಯಲ್ಲಿ ಪ್ರವೇಶ ಪಡೆಯುವ ಸಮಯದಲ್ಲಿ ವಿದ್ಯಾರ್ಥಿನಿಯರಿಗೆ ಉಲ್ಲೇಖ-1ರಲ್ಲಿ ತಿಳಿಸಿರುವಂತೆ **2019-20ನೇ** ಸಾಲಿನಿಂದ ರೂ.456/- ಶುಲ್ಕದಿಂದ ವಿನಾಯಿತಿ ನೀಡಿ ಪ್ರವೇಶ ನೀಡಲು ಆದೇಶಿಸಲಾಗಿತ್ತು. ಕಳೆದ ಎರಡು ವರ್ಷಗಳಿಂದ ಕೇವಲ ಆಯಾ ವರ್ಷಗಳಿಗೆ ಮಾತ್ರ ಸೀಮಿತವಾಗಿ ಶುಲ್ಕದಿಂದ ವಿನಾಯಿತಿ ನೀಡಿ ಪ್ರಾಂಶುಪಾಲರ ಖಾತೆಗೆ ಜಮೆ ಮಾಡಲು ಅನುಮತಿ ನೀಡಲಾಗುತ್ತಿತ್ತು.

ಆದರೆ ಉಲ್ಲೇಖ-2ರ ಸರ್ಕಾರದ ಆದೇಶದಂತೆ 2022-23ನೇ ಶೈಕ್ಷಣಿಕ ಸಾಲಿನಿಂದ **ಶಾಶ್ವತವಾಗಿ** ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ಸಮಯದಲ್ಲಿ ವಿದ್ಯಾರ್ಥಿನಿಯರಿಗೆ ರೂ. **456 ಶುಲ್ಕದಿಂದ** ಸಂಪೂರ್ಣ ವಿನಾಯತಿ ನೀಡಲಾಗಿರುತ್ತದೆ.

ಮುಂದುವರೆದು ಶುಲ್ಕ ಮರುಪಾವತಿಗಾಗಿ ಲೆಕ್ಕಶೀರ್ಷಿಕೆ: **2202-02-001-0-01**ರ **ಉಪಶೀರ್ಷಿಕೆ 103ರಡಿಯಲ್ಲಿ** ಒದಗಿಸುವ ಅನುದಾನವನ್ನು ಸಂಬಂಧಿಸಿದ ಪ್ರಾಂಶುಪಾಲರ ಖಾತೆಗೆ ಖಜಾನೆ-2 ತಂತ್ರಾಂಶದ ಮೂಲಕ ಬಿಡುಗಡೆಗೊಳಿಸಲು ಅಗತ್ಯಕ್ರಮ ಕೈಗೊಳಲು ಈ ಮೂಲಕ ಸೂಚಿಸಿದೆ.

29/6/22

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ಕ್ರಮಕ್ಕಾಗಿ:**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ.
2. ಸಹಾಯಕ ನಿರ್ದೇಶಕರು, ಇ-ಆಡಳಿತ ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಇಲಾಖಾ ಜಾಲತಾಣದಲ್ಲಿ ಅಳವಡಿಸಲು

**ಮಾಹಿತಿಗಾಗಿ:**

1. ಆಪ್ತ ಕಾರ್ಯದರ್ಶಿಗಳು, ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು, ಬೆಂಗಳೂರು.

2. ಆಪ್ತ ಕಾರ್ಯದರ್ಶಿಗಳು, ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ.
4. ಹೆಚ್ಚುವರಿ / ಕಛೇರಿ ಪ್ರತಿ .